**ಕರ್ನಾಟಕ ಸರ್ಕಾರದ ನಡವಳಿಗಳು**
**(ಜಲಸಂಪನ್ಮೂಲ ಇಲಾಖೆ)**

ವಿಷಯ: ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಸೌಕೂರು ಏತ ನೀರಾವರಿ ಯೋಜನೆಯ ರೂ.73.71ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ:ಕನೀನಿ/ಟಿವಿಪಿ/ಸೌಕೂರು ಏನೀಯೋ/2019-20/1937 ದಿನಾಂಕ:16.07.2019.

****

ಪ್ರಸ್ತಾವನೆ :

ಮೇಲೆ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರದಲ್ಲಿ, ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಸೌಕೂರು ಗ್ರಾಮದ ಬಳಿ ಏತ ನೀರಾವರಿಯನ್ನು ನಿರ್ಮಿಸಿ, ಸೌಕೂರು, ಕರ್ಕುಂಜೆ, ಕೆಂಚನೂರು, ದೇವಲ್ಕುಂದ, ಕನ್ಯಾನಾ ಮತ್ತು ಸುತ್ತಮುತ್ತಲಿನ ಗ್ರಾಮಗಳ 1350 ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯವನ್ನು ಒದಗಿಸುವಂತೆ ಸ್ಥಳೀಯ ರೈತರು ಹಾಗೂ ಜನಪ್ರತಿನಿಧಿಗಳು ಒತ್ತಾಯಿಸುತ್ತಿರುವ ಬಗ್ಗೆ ತಿಳಿಸಿರುತ್ತಾರೆ. ಆದ್ದರಿಂದ, ಕುಂದಾಪುರ ತಾಲ್ಲೂಕಿನ ಬಳ್ಕೂರು ಎಂಬಲ್ಲಿ ವಾರಾಹಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಉಪ್ಪು ನೀರು ತಡೆ ಅಣೆಕಟ್ಟಿನ ಮೇಲ್ಭಾಗದಲ್ಲಿ ಸೌಕೂರು ಗ್ರಾಮದ ಹತ್ತಿರ ಏತ ನೀರಾವರಿ ನಿರ್ಮಿಸಿ 0.589 ಟಿ.ಎಂ.ಸಿ. ನೀರನ್ನು ಏರುಕೊಳವೆ ಮುಖಾಂತರ ಹರಿಸಿ, 1350 ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಕಲ್ಪಿಸಲು ಈ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ. ಸದರಿ ಯೋಜನೆಯನ್ನು 2019-20ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿದೆ.

ಮುಂದುವರೆದು, ಸದರಿ ಕಾಮಗಾರಿಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:06.06.2019 ರಂದು ಜರುಗಿದ 56ನೇ ನಿಗಮದ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಮಂಡಿಸಲಾಗಿದ್ದು, ಸಮಿತಿಯು ತೀರುವಳಿ ನೀಡಿ, ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆ ಪಡೆಯಲು ಶಿಫಾರಸ್ಸು ಮಾಡಿರುತ್ತದೆ. ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ ದಿನಾಂಕ:09.07.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 88ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ವಾರಾಹಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಉಪ್ಪು ನೀರು ತಡೆ ಅಣೆಕಟ್ಟಿನ ಮೇಲ್ಭಾಗದಲ್ಲಿ ಸೌಕೂರು

ಗ್ರಾಮದ ಹತ್ತಿರ ಏತ ನೀರಾವರಿ ನಿರ್ಮಿಸಿ ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಸೌಕೂರು ಏತ ನೀರಾವರಿ ಯೋಜನೆಯ ರೂ.73.71ಕೋಟಿಗಳ ವಿವರವಾದ ಯೋಜನಾ ವರದಿಗೆ ಅನುಮೋದನೆ ನೀಡಿ, ಸರ್ಕಾರದ ಆಡಳಿತಾತ್ಮಕ ಅನುಮೋದನೆಗೆ ಶಿಫಾರಸ್ಸು ಮಾಡಿರುತ್ತದೆ ಎಂದು ತಿಳಿಸಲಾಗಿರುತ್ತದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ, ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಸೌಕೂರು ಏತ ನೀರಾವರಿ ಯೋಜನೆಯ 2018–19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.73.71ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 06 ಎಂಎಂಎಂ 2017**

**ಬೆಂಗಳೂರು, ದಿನಾಂಕ :21.08.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಸೌಕೂರು ಏತ ನೀರಾವರಿ ಯೋಜನೆಯ 2018–19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.73.71ಕೋಟಿ (ಎಪ್ಪತ್ತಮೂರು ಕೋಟಿ ಎಪ್ಪತ್ತೊಂದು ಲಕ್ಷ ರೂಪಾಯಿ ಮಾತ್ರ) ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಂಖ್ಯೆ:5647, ದಿನಾಂಕ:26.07.2019ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

[ಶ್ರೀಹರಿ ಎಸ್.ಆರ್.]
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-1),
ಜಲ ಸಂಪನ್ಮೂಲ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398,ಬೆಂಗಳೂರು–01.

2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪಟ ಶಾಖೆ), ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ:455/2019, ದಿನಾಂಕ:05.08.2019ರ ಮೇರೆಗೆ).
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ವೆಚ್ಚ) ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
6. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋ.ಇ., ಆರ್ಥಿಕ ಕೋಶ) ವಿಧಾನಸೌಧ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
9. ನಿರ್ದೇಶಕರು, ಜಿಯೋಮ್ಯಾಟಿಕ್ಸ್ ಕೇಂದ್ರ, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
10. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
13. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.